**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 2378/2021**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.06**

**ದಿನಾಂಕಃ 13.11.2025** **ಸಿಡಬ್ಲ್ಯೂ.05**

| | |
|---|---|
| ಹೆಸರು | ಪಕ್ಕೀರೇಶ |
| ತಂದೆ ಹೆಸರು | ರಾಜಶೇಖರ |
| ವಯಸ್ಸು | 36 ವರ್ಷ |
| ಉದ್ಯೋಗ | ಪ್ಲಂಬರ್ ಕೆಲಸ |
| ವಾಸ ಸ್ಥಳ | ಹರಿಹರ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಆರೋಪಿತರ ಪರಿಚಯವಿದೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು ಅದು ವಾಹನ ಅಮಾನತು ಪಂಚನಾಮೆ ಆಗಿದ್ದು ಅದನ್ನು ನಿಪಿ.6 ಎಂದು ಸಾಕ್ಷಿಯ ಸಹಿಯನ್ನು ನಿಪಿ.6 (ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಗುತ್ತೂರು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಸಂದರ್ಭದಲ್ಲಿ ಪೊಲೀಸರು ಮದ್ಯಾಹ್ನ ಒಂದು ಸ್ಕಾರ್ ಪಿಒ ಕಾರನ್ನು ಜಪ್ತು ಪಡಿಸಿಕೊಂಡಿದ್ದರು. ಸದರಿ ಸಂದರ್ಭದಲ್ಲಿ ಪೊಲೀಸರು ಛಾಯ ಚಿತ್ರ ತೆಗೆದಿರುತ್ತಾರೆ. ಸಾಕ್ಷಿಯು ಗುರುತಿಸಿದ ಛಾಯ ಚಿತ್ರವನ್ನು ನಿಪಿ. 7 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಭಾಗಶಃ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ಜಪ್ತು ಪಡಿಸಿಕೊಂಡ ವಾಹನ ಸಂಖ್ಯೆ ಕೆಎ/24 ಎಂ 2420 ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಜಿ ಕೆ ಡಿ ವಕೀಲರಿಂದಃ**

ಆರೋಪಿಯನ್ನು ನಾನು ಇವತ್ತೇ ನ್ಯಾಯಾಲಯದಲ್ಲಿ ನೋಡುತ್ತಿದ್ದೇನೆ ಎಂದರೆ ಸರಿ. ನಿಪಿ.6 ಪಂಚನಾಮೆಯಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿ. ನಿಪಿ.7 ನ್ನು ವಾಹನ

ಪಂಚನಾಮೆಗೆ ತೆಗದಿರುತ್ತಾರೆ. ಸದರಿ ವಾಹನವನ್ನು ಯಾವ ಕಾರಣಕ್ಕಾಗಿ ಜಪ್ತು ಪಡಿಸಿಕೊಂಡಿರುತ್ತಾರೆ ಎಂದು ನನಗೆ ಮಾಹಿತಿ ಇಲ್ಲ. ಆರೋಪಿ ಯಾವುದೇ ತಪ್ಪು ಇಲ್ಲದಿದ್ದರೂ ಸಹ ಪೊಲೀಸರ ಮಾತು ಕೇಳಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ